ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 912 (925)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ವಿಷಯ : ರಾಜ್ಯದಲ್ಲಿ ಸಂಚರಿಸುತ್ತಿರುವ ಹಳೆ ಬಸ್‌ಗಳನ್ನು ಬದಲಾಯಿಸುವ ಬಗ್ಗೆ

(ಅ) ರಾಜ್ಯದಲ್ಲಿ ಸರ್ಕಾರಿ ಬಸ್‌ಗಳ ಸಂಖ್ಯೆ ಎಷ್ಟು; 10 ಲಕ್ಷಕ್ಕಿಂತ ಹೆಚ್ಚು ಕಿ.ಮೀ. ಕ್ರಮಿಸಿರುವ ವಾಹನಗಳ ಸಂಖ್ಯೆ ಎಷ್ಟು ;

(ಆ) 10 ಲಕ್ಷಕ್ಕಿಂತ ಹೆಚ್ಚು ಕಿ.ಮೀ. ಕ್ರಮಿಸಿರುವ ವಾಹನಗಳನ್ನು ನಿಷ್ಕ್ರೀಯಗೊಳಿಸಿ ನೂತನ ವಾಹನಗಳನ್ನು ನೀಡಲು ಸರ್ಕಾರ ಉದ್ದೇಶಿಸಲಾಗಿದೆಯೇ ;

(ಇ) ಕೊಡಗು ಜಿಲ್ಲ್ಲೆಯಲ್ಲಿ 10 ಲಕ್ಷಕ್ಕಿಂತ ಹೆಚ್ಚು ಕಿ.ಮೀ. ಕ್ರಮಿಸಿರುವ ವಾಹನಗಳು ಇದೆಯೇ ; ಇದ್ದಲ್ಲಿ, ಎಷ್ಟು ವಾಹನಗಳಿವೆ ; ಇವುಗಳ ಬದಲಾವಣೆ ಮಾಡಲು ಸರ್ಕಾರದ ಕ್ರಮಗಳೇನು ; (ವಿವರ ನೀಡುವುದು)

(ಈ) ಸಾರಿಗೆ ಘಟಕಗಳಲ್ಲಿ ಸಿಬ್ಬಂದಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೊಡಗು ಜಿಲ್ಲೆಯಲ್ಲಿ ಒಂದೇ ಘಟಕ ಮಾತ್ರ ಇದ್ದು, ಹೊಸ ಘಟಕಗಳನ್ನು ತೆರೆಯಲು ಸರ್ಕಾರದ ಕ್ರಮಗಳೇನು ?